No. ED/KEA/UGCET-UGNEET/2024 Date: 22-09-2024

**ಇಂಜಿನಿಯರಿಂಗ್, ಆರ್ಕಿಟೆಕ್ಚರ್, ಯೋಗ ಮತ್ತು ನ್ಯಾಚುರೋಪತಿ, ಕೃಷಿ ವಿಜ್ಞಾನ, ವೆಟರಿನರಿ, ಬಿಎಸ್‌ಸಿ (ನರ್ಸಿಂಗ್) ಬಿ-ಫಾರ್ಮ್, ಫಾರ್ಮ್-ಡಿ ಕೋರ್ಸುಗಳಿಗೆ ಎರಡನೇ ಸುತ್ತಿನ ಸೀಟು ಹಂಚಿಕೆಯ ಫಲಿತಾಂಶ**

ಇಂಜಿನಿಯರಿಂಗ್, ಆರ್ಕಿಟೆಕ್ಚರ್, ಯೋಗ ಮತ್ತು ನ್ಯಾಚುರೋಪತಿ, ಕೃಷಿ ವಿಜ್ಞಾನ, ವೆಟರಿನರಿ, ಬಿಎಸ್‌ಸಿ (ನರ್ಸಿಂಗ್), ಬಿ-ಫಾರ್ಮ್, ಫಾರ್ಮ್-ಡಿ, ಕೋರ್ಸುಗಳ ಪ್ರವೇಶಾತಿಗೆ ಅರ್ಹ ಅಭ್ಯರ್ಥಿಗಳು ಆದ್ಯತಾ ಕ್ರಮದಲ್ಲಿ ದಾಖಲಿಸಿರುವ (Options) ಇಚ್ಛೆ / ಆಯ್ಕೆಗಳನ್ನು ಪರಿಗಣಿಸಿ, ಅಭ್ಯರ್ಥಿಯ ಮೆರಿಟ್ ಮತ್ತು ರೋಸ್ಟರ್ ಪದ್ಧತಿ ಅನುಸಾರ ಎರಡನೇ ಸುತ್ತಿನ ಸೀಟು ಹಂಚಿಕೆಯ ಅಂತಿಮ ಫಲಿತಾಂಶವನ್ನು 22-09-20204 ರಂದು ಪ್ರಾಧಿಕಾರದ ವೆಬ್‌ಸೈಟಿನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗುವುದು.

**ಎರಡನೇ ಸುತ್ತಿನ ಸೀಟು ಹಂಚಿಕೆಯ ನಂತರದ ಸೂಚನೆಗಳು**

ಎರಡನೇ ಸುತ್ತಿನ ಸೀಟು ಹಂಚಿಕೆಯ ಫಲಿತಾಂಶವನ್ನು ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಪರಿಶೀಲಿಸಿದ ನಂತರ ಅಭ್ಯರ್ಥಿಗಳಿಗೆ ಈ ಕೆಳಗೆ ವಿವರಿಸಿರುವಂತೆ ನಿರ್ಣಯಗಳನ್ನು ತೆಗೆದುಕೊಳ್ಳಬಹುದಾಗಿರುತ್ತದೆ.

ಎರಡನೇ ಸುತ್ತಿನಲ್ಲಿ ಸೀಟು ಹಂಚಿಕೆಯಾದ ಅಭ್ಯರ್ಥಿಗಳಿಗೆ ವಿವಿಧ ನಾಲ್ಕು **CHOICE** ಗಳನ್ನು ನೀಡಲಾಗುವುದು. ಅಭ್ಯರ್ಥಿಗಳು ನಾಲ್ಕು **CHOICE** ಗಳಲ್ಲಿ ತಮಗೆ ಸರಿ ಎನಿಸುವ ಯಾವುದಾದರೂ ಒಂದು **CHOICE** ಅನ್ನು ಆಯ್ಕೆ ಮಾಡುವ ಮೊದಲು, ಪ್ರತಿ **CHOICE** ಗಳ ವಿವರಣೆಯನ್ನು ಓದಿ ಸರಿಯಾಗಿ ಅರ್ಥೈಸಿಕೊಂಡು, ತಮ್ಮ ಪೋಷಕರೊಡನೆ ಚರ್ಚಿಸಿ ಅಭ್ಯರ್ಥಿಯು ತನಗೆ ಸೂಕ್ತವೆನಿಸಿದ **CHOICE** ಅನ್ನು ಆಯ್ಕೆ ಮಾಡಿಕೊಳ್ಳಲು ಸೂಚಿಸಿದೆ. ನಾಲ್ಕು **CHOICE** ಗಳಲ್ಲಿ ಯಾವುದೇ **CHOICE** ಅನ್ನು ಆಯ್ಕೆ ಮಾಡದಿರುವ ಅಭ್ಯರ್ಥಿಗಳು ಮುಂದಿನ ಸುತ್ತುಗಳಲ್ಲಿ ಭಾಗವಹಿಸಲು ಅರ್ಹತೆಯನ್ನು ಪಡೆಯುವುದಿಲ್ಲ.

**OPTIONS** ಗಳನ್ನು ನೀಡಿ ಆದರೆ ಯಾವುದೇ ಸೀಟು ಹಂಚಿಕೆಯಾಗದೇ ಇರುವ ಅಭ್ಯರ್ಥಿಗಳಿಗೆ ಯಾವುದೇ **CHOICE** ಅನ್ನು ಆಯ್ಕೆ ಮಾಡುವ ಅವಕಾಶ ಇರುವುದಿಲ್ಲ. ಅಂತಹ ಅಭ್ಯರ್ಥಿಗಳು ಈಗಾಗಲೇ ದಾಖಲಿಸಿರುವ ಇಚ್ಛೆ / ಆಯ್ಕೆಗಳೊಂದಿಗೆ ಮುಂದಿನ ಸುತ್ತಿನ ಸೀಟು ಹಂಚಿಕೆಯಲ್ಲಿ ಭಾಗವಹಿಸಬಹುದು.

- ಯುಜಿಸಿಇಟಿ ಕೋರ್ಸುಗಳಾದ ಇಂಜಿನಿಯರಿಂಗ್, ಆರ್ಕಿಟೆಕ್ಚರ್, ಫಾರ್ಮ ಸೈನ್ಸ್, ವೆಟರಿನರಿ, ಬಿ-ಫಾರ್ಮ್, ಫಾರ್ಮ-ಡಿ, ಬಿಎಸ್‌ಸಿ(ನರ್ಸಿಂಗ್), ನ್ಯಾಚುರೋಪತಿ ಮತ್ತು ಯೋಗ ಮುಂತಾದ ಕೋರ್ಸುಗಳ ಎರಡನೇ ಸುತ್ತಿನ ಸೀಟು ಹಂಚಿಕೆಯ ನಂತರ ಸೂಕ್ತವಾದ **CHOICE** ಅನ್ನು ಆಯ್ಕೆ ಮಾಡುವುದರಿಂದ ಮುಂದಿನ ಸುತ್ತಿನಲ್ಲಿ ಭಾಗವಹಿಸಬಹುದು.
- ಎರಡನೇ ಸುತ್ತಿನಲ್ಲಿ ಹಂಚಿಕೆಯಾಗುವ ಸೀಟಿಗೆ ಅಭ್ಯರ್ಥಿಗಳು, **CHOICE-1** ಅನ್ನು ಆಯ್ಕೆ ಮಾಡಿದಲ್ಲಿ, ಅಂತಹ ಅಭ್ಯರ್ಥಿಗಳನ್ನು ಎರಡನೇ ಮುಂದುವರಿದ ಸುತ್ತಿನ ಯುಜಿಸಿಇಟಿ ಕೋರ್ಸುಗಳಿಗೆ ಅಥವಾ ಯುಜಿನೀಟ್ ಮಾಪ್ ಅಪ ಸುತ್ತಿನ ಸೀಟು ಹಂಚಿಕೆಗೆ ಪರಿಗಣಿಸುವುದಿಲ್ಲ.
- ಒಂದು ವೇಳೆ ಅಭ್ಯರ್ಥಿಗಳು ತನಗೆ ಹಂಚಿಕೆಯಾದ ಸೀಟು ತೃಪ್ತಿಕರವಾಗಿದ್ದು, ಯಾವುದೇ ಬದಲಾವಣೆ ಬೇಡ ಎಂದೆನಿಸಿದಲ್ಲಿ ಮಾತ್ರ **CHOICE-1** ಅನ್ನು ಆಯ್ಕೆ ಮಾಡಬಹುದು. ಮುಂದಿನ ಯಾವುದೇ ಸುತ್ತುಗಳಲ್ಲಿ ಭಾಗವಹಿಸಲು ಅರ್ಹತೆ ಇರುವುದಿಲ್ಲ ಎಂಬುದನ್ನು ಗಮನದಲ್ಲಿಟ್ಟುಕೊಂಡು **CHOICE-1** ಅನ್ನು ಆಯ್ಕೆ ಮಾಡಲು ಸೂಚಿಸಿದೆ.
-

**ಯುಜಿಸಿಇಟಿ 2024 ರ ಎರಡನೇ ಮುಂದುವರಿದ ಸೀಟು ಹಂಚಿಕೆಯ ಫಲಿತಾಂಶದ ನಂತರದ ಪ್ರಕ್ರಿಯೆ**

1. ಎರಡನೇ ಮುಂದುವರಿದ ಸುತ್ತಿನ ಸೀಟು ಹಂಚಿಕೆಯ ಫಲಿತಾಂಶ ಪ್ರಕಟಣೆಯ ನಂತರ ಅಭ್ಯರ್ಥಿಗಳಿಗೆ ಯಾವುದೇ ಛಾಯ್ಸ್ ಗಳು ಆಯ್ಕೆ ಮಾಡಲು ಅವಕಾಶ ಇರುವುದಿಲ್ಲ.
2. ಅಭ್ಯರ್ಥಿಗಳು ಕಡ್ಡಾಯವಾಗಿ ಹಂಚಿಕೆಯಾದ ಸೀಟಿಗೆ ಪ್ರವೇಶವನ್ನು ಪಡೆಯಬೇಕು, ಆದ್ದರಿಂದ ಅಭ್ಯರ್ಥಿಗಳು ಮತ್ತು ಪೋಷಕರು ಕಾಲೇಜಿಗೆ ಸೇರ ಬಯಸುವ ಇಷ್ಟವಿರುವ ಕಾಲೇಜುಗಳನ್ನು ಮಾತ್ರ ದಾಖಲಿಸಬೇಕು, ಏಕೆಂದರೆ ಮೆರಿಟ್ ಆಧಾರದ ಮೇಲೆ ಹಾಗು ಅಭ್ಯರ್ಥಿಗಳು ದಾಖಲಿಸುವ options ಗಳನ್ನು ಪರಿಗಣಿಸಿ ಸೀಟು ಹಂಚಿಕೆ ಮಾಡುವುದರಿಂದ ಹಂಚಿಕೆಯಾದ ಸೀಟನ್ನು ನಿರಾಕರಿಸುವಂತಿಲ್ಲ. ಆದ್ದರಿಂದ ಅಭ್ಯರ್ಥಿಗಳು ಎಚ್ಚರದಿಂದ options ಗಳನ್ನು ಆದ್ಯತೆಯ ಕ್ರಮಾಂಕದಲ್ಲಿ ಸಲ್ಲಿಸಬೇಕು.
3. ಎರಡನೇ ಮುಂದುವರಿದ ಸುತ್ತಿನ ಸೀಟು ಹಂಚಿಕೆಯ ನಂತರ ಶುಲ್ಕ ಪಾವತಿಸಲು ಅಥವಾ ಕಾಲೇಜಿನಲ್ಲಿ ಪ್ರವೇಶ ಪಡೆಯಲು ವಿಫಲನಾದಲ್ಲಿ ಅಂತಹ ಅಭ್ಯರ್ಥಿಯ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು ಮತ್ತು ಮುಂದಿನ ಮೂರು ವರ್ಷಗಳವರೆಗೆ ಸದರಿ ಕೋರ್ಸಿಗೆ ಅವಕಾಶ ನೀಡುವುದಿಲ್ಲ.
4. ಅಭ್ಯರ್ಥಿಯು ಅವರ option portal ನಲ್ಲಿ ಅನಗತ್ಯ options ಗಳು ಇದೆ ಎಂದು ತೀರ್ಮಾನಿಸಿದಲ್ಲಿ, ಪೋಷಕರೊಡನೆ ಸಮಾಲೋಚಿಸಿ ಅಂತಹ options ಗಳನ್ನು ಅಳಿಸಬಹುದು ಎಂದು ಅಭ್ಯರ್ಥಿಗಳಿಗೆ ಸೂಚಿಸಲಾಗಿದೆ.

ಎರಡನೇ ಸುತ್ತಿನಲ್ಲಿ ಹಂಚಿಕೆಯಾದ ಸೀಟುಗಳ **CHOICES** ಗಳ ವಿವರಣೆ

**CHOICE-1** – ನನಗೆ ಎರಡನೇ ಸುತ್ತಿನಲ್ಲಿ ಹಂಚಿಕೆಯಾದ ಸೀಟು ಸಂಪೂರ್ಣವಾಗಿ ಇಷ್ಟವಾಗಿದ್ದು ನಾನು ಕಾಲೇಜಿಗೆ ಸೇರುತ್ತೇನೆ, ನನಗೆ ಯಾವುದೇ ಬದಲಾವಣೆ ಅವಶ್ಯಕತೆ ಇರುವುದಿಲ್ಲ. ಮುಂದಿನ ಸುತ್ತುಗಳಲ್ಲಿ (ಯುಜಿನೀಟ್ ವೈದ್ಯಕೀಯ ಅಥವಾ ದಂತ ವೈದ್ಯಕೀಯ ಅಥವಾ ಆಯುಷ್ ಅಥವಾ ಇಂಜಿನಿಯರಿಂಗ್ / ಆರ್ಕಿಟೆಕ್ಚರ್ / ಫಾರ್ಮ ಸೈನ್ಸ್ / ವೆಟರಿನರಿ / ಫಾರ್ಮಸಿ / ಬಿಎಸ್‌ಸಿ ನರ್ಸಿಂಗ್, ನ್ಯಾಚರೋಪತಿ ಮತ್ತು ಯೋಗ ಮುಂತಾದ ಕೋರ್ಸುಗಳಿಗೆ) ಭಾಗವಹಿಸಲೂ ಸಹ ನನಗೆ ಇಷ್ಟವಿರುವುದಿಲ್ಲ, ಆದ್ದರಿಂದ ನನ್ನನ್ನು ಮುಂದಿನ ಯಾವುದೇ ಸುತ್ತುಗಳಲ್ಲಿ ಸೀಟು ಹಂಚಿಕೆಗೆ ಪರಿಗಣಿಸಬಾರದು. ನಾನು ಎರಡನೇ ಸುತ್ತಿನಲ್ಲಿ ಹಂಚಿಕೆಯಾದ ಸೀಟಿಗೆ ಶುಲ್ಕವನ್ನು ಪಾವತಿಸಿ, ಪ್ರವೇಶ ಪತ್ರವನ್ನು ಡೌನ್‌ಲೋಡ್ ಮಾಡಿಕೊಂಡು ಕಾಲೇಜಿನಲ್ಲಿ ನಿಗದಿತ ದಿನಾಂಕದೊಳಗೆ ಪ್ರವೇಶ ಪಡೆಯುತ್ತೇನೆ ನಂತರ ಲಾಗಿನ್ ಮಾಡಿ ಕಾಲೇಜಿನಲ್ಲಿ ಪ್ರವೇಶ ಪಡೆದ ಬಗ್ಗೆ ಮಾಹಿತಿಯನ್ನು ಸಲ್ಲಿಸುತ್ತೇನೆ ಎಂದು ಧೃಡೀಕರಿಸುತ್ತೇನೆ.

ಕ್ರಮ: ಅಭ್ಯರ್ಥಿಗಳು ಈ ಮೇಲಿನ ರೀತಿಯಲ್ಲಿ ಕ್ರಮವಹಿಸುವುದಾಗಿದ್ದರೆ, ಪ್ರಾಧಿಕಾರದ ವೆಬ್‌ಸೈಟಿನಲ್ಲಿ ನಿಗದಿತ ಲಿಂಕ್‌ನಲ್ಲಿ **CHOICE-1** ಅನ್ನು ಆಯ್ಕೆ ಮಾಡಿಕೊಂಡು ಮುಂದಿನ ಕ್ರಮವಹಿಸಬಹುದು.

ಮುಖ್ಯವಾದುದು: **CHOICE-1**ಅನ್ನು ಆಯ್ಕೆ ಮಾಡಿಕೊಳ್ಳುವ ಅಭ್ಯರ್ಥಿಗಳು ಮುಂದಿನ ಯಾವುದೇ ಸುತ್ತುಗಳಲ್ಲಿ ಭಾಗವಹಿಸಲು ಅರ್ಹತೆಯನ್ನು ಪಡೆಯುವುದಿಲ್ಲ. ಶುಲ್ಕವನ್ನು ಪಾವತಿಸಿ ಪ್ರವೇಶ ಪತ್ರವನ್ನು ಡೌನ್‌ಲೋಡ್ ಮಾಡಿ ಕಾಲೇಜಿನಲ್ಲಿ ಪ್ರವೇಶ ಪಡೆಯಲು ವಿಫಲರಾದಲ್ಲಿ ಅಂತಹ ಅಭ್ಯರ್ಥಿಗಳು ಪಡೆದ ಸೀಟುಗಳು ರದ್ದಾಗುತ್ತದೆ ಹಾಗು ಶುಲ್ಕವನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು.

**CHOICE-1 ಅನ್ನು ಆಯ್ಕೆ ಮಾಡುವ ಅಭ್ಯರ್ಥಿಗಳು ಈ ಕೆಳಗಿನ ನಿರ್ದೇಶನಗಳನ್ನು ಪಾಲಿಸಬೇಕು.**

ಅ) ಸೀಟು ಹಂಚಿಕೆ ಫಲಿತಾಂಶ ಪ್ರಕಟವಾದ ನಂತರ ಅಭ್ಯರ್ಥಿಯು ತಮಗೆ ದೊರಕಿರುವ ಸೀಟು ತೃಪ್ತಿಕರವಾಗಿದ್ದಲ್ಲಿ, **CHOICE-1** ಅನ್ನು ಪ್ರಾಧಿಕಾರದ ವೆಬ್‌ಸೈಟ್ ನಲ್ಲಿ ಆಯ್ಕೆ ಮಾಡಿಕೊಳ್ಳಬೇಕು.

ಆ) ನಂತರ ಅದೇ ವೆಬ್ ಸೈಟ್‌ನಿಂದಲೇ ಮೂರು ಪ್ರತಿಯುಳ್ಳ ಚಲನ್ ಅನ್ನು ಡೌನ್ ಲೋಡ್ ಮಾಡಿಕೊಳ್ಳಬೇಕು / ಪ್ರಿಂಟ್ ತೆಗೆದುಕೊಳ್ಳಬೇಕು.

ಇ) ಚಲನ್ ನಲ್ಲಿ ಅಭ್ಯರ್ಥಿಯ ಎಲ್ಲಾ ವಿವರಗಳು ಅಂದರೆ, ಅಭ್ಯರ್ಥಿಯ ಹೆಸರು, ಸಿಇಟಿ ಸಂಖ್ಯೆ, ಆಯ್ಕೆಯಾಗಿರುವ ಕಾಲೇಜು ಮತ್ತು ಕೋರ್ಸಿನ ವಿವರ, ಅಭ್ಯರ್ಥಿಯು ಪಾವತಿಸಬೇಕಾದ ಶುಲ್ಕ, ಬ್ಯಾಂಕ್ ಖಾತೆ ಸಂಖ್ಯೆ ಇವೆಲ್ಲವನ್ನೂ ಮುದ್ರಿಸಲಾಗುವುದು. ಅಭ್ಯರ್ಥಿಯು ಸರಿಯಾಗಿದೆ ಎಂದು ಪರಿಶೀಲಿಸಿ ಸಹಿ ಮಾಡಬೇಕು. ನಂತರ ನಿಗದಿತ ಶುಲ್ಕವನ್ನು ಪಾವತಿಸಬೇಕು.

ಈ) ಪ್ರಾಧಿಕಾರದ ವೆಬ್‌ಸೈಟ್ ನಿಂದ ಪ್ರವೇಶ ಪತ್ರವನ್ನು ಪಡೆದು ನಿಗದಿ ಪಡಿಸಿದ ಜಾಗದಲ್ಲಿ ಅಭ್ಯರ್ಥಿಯು ಸಹಿಯನ್ನು ಮಾಡಬೇಕು ಹಾಗು ಎಲ್ಲಾ ಮೂಲ ದಾಖಲೆಗೊಳೊಂದಿಗೆ ಪ್ರವೇಶ ಪತ್ರದಲ್ಲಿ ಮುದ್ರಿಸುವ ಕೊನೆಯ ದಿನಾಂಕದ ಒಳಗಾಗಿ ಸಂಬಂಧಿಸಿದ ಕಾಲೇಜಿನಲ್ಲಿ ಪ್ರವೇಶ ಪಡೆಯಬೇಕು.

ಉ) ಕಾಲೇಜಿನಲ್ಲಿ ಪ್ರವೇಶ ಪಡೆದ ನಂತರ ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ನಿಗದಿತ ಲಿಂಕ್‌ನಲ್ಲಿ ಪ್ರವೇಶ ಪಡೆದ ಬಗ್ಗೆ ದಾಖಲಿಸಬೇಕು.

ಊ) ಇಂಜಿನಿಯರಿಂಗ್, ಆರ್ಕಿಟೆಕ್ಚರ್, ಯೋಗ ಮತ್ತು ನ್ಯಾಚುರೋಪತಿ, ಕೃಷಿ ವಿಜ್ಞಾನ, ವೆಟರಿನರಿ, ಬಿಎಸ್‌ಸಿ (ನರ್ಸಿಂಗ್) ಬಿ–ಫಾರ್ಮ, ಫಾರ್ಮ–ಡಿ ಸೀಟನ್ನು ಪಡೆದವರು ಮೂಲ ದಾಖಲೆಗಳನ್ನು ಕೆಇಎ, ಬೆಂಗಳೂರು **ಇಲ್ಲಿ ಸಲ್ಲಿಸಬಾರದು, ಆದರೆ** ಸಂಬಂಧಿಸಿದ ಕಾಲೇಜಿನಲ್ಲಿ ಪ್ರವೇಶಾತಿ ಪಡೆಯುವ ಸಮಯದಲ್ಲಿ ಆಯಾ ಕಾಲೇಜಿನಲ್ಲಿಯೇ ಮೂಲ ದಾಖಲೆಗಳನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು.

**CHOICE-2–** ನನಗೆ ಎರಡನೇ ಸುತ್ತಿನಲ್ಲಿ ಹಂಚಿಕೆಯಾದ ಸೀಟು ಇಷ್ಟವಾಗಿರುತ್ತದೆ ಆದರೆ ನಾನು ಇನ್ನೂ ಉತ್ತಮವಾದ ಸೀಟನ್ನು ಪಡೆಯಲು ಎರಡನೇ ಮುಂದುವರಿದ ಸುತ್ತಿನಲ್ಲಿ ಭಾಗವಹಿಸುತ್ತೇನೆ. ಎರಡನೇ ಸುತ್ತಿನಲ್ಲಿ ಹಂಚಿಕೆಯಾದ ಸೀಟಿಗೆ ಪ್ರಾಧಿಕಾರದ ವೆಬ್‌ಸೈಟಿನಿಂದ ಚಲನ್ ಡೌನ್‌ಲೋಡ್ ಮಾಡಿ ಶುಲ್ಕವನ್ನು ಪಾವತಿಸುತ್ತೇನೆ. ಅಭ್ಯರ್ಥಿಗೆ ಯುಜಿಸಿಇಟಿ ಕೋರ್ಸುಗಳಾದ ಇಂಜಿನಿಯರಿಂಗ್, ಆರ್ಕಿಟೆಕ್ಚರ್, ಫಾರ್ಮ ಸೈನ್ಸ್, ವೆಟರಿನರಿ, ಬಿ–ಫಾರ್ಮ, ಫಾರ್ಮ–ಡಿ, ಬಿಎಸ್‌ಸಿ (ನರ್ಸಿಂಗ್), ನ್ಯಾಚುರೋಪತಿ ಮತ್ತು ಯೋಗ ಸೀಟುಗಳಲ್ಲಿ ಎರಡನೇ ಸುತ್ತಿನಲ್ಲಿ ಯಾವುದೇ ಡಿಸಿಪ್ಲೀನ್‌ನಲ್ಲಿ ಅಥವಾ ಯಾವುದೇ ವರ್ಗದಲ್ಲಿ ಸೀಟು ಹಂಚಿಕೆಯಾಗಿದ್ದಲ್ಲಿ ಎರಡನೇ ಮುಂದುವರಿದ ಸುತ್ತಿನಲ್ಲಿ ಭಾಗವಹಿಸಲು ಅರ್ಹತೆ ಪಡೆಯಲು ನಿಗದಿತ ಶುಲ್ಕವನ್ನು ಪಾವತಿಸಬೇಕು.

ಕ್ರಮ: ಮುಂದಿನ ಎರಡನೇ ಮುಂದುವರಿದ ಸುತ್ತಿನಲ್ಲಿ ಮೆರಿಟ್ ಆಧಾರದ ಮೇಲೆ **higher order options** ಗಳಲ್ಲಿ ಯಾವುದೇ ಸೀಟು ಹಂಚಿಕೆಯಾದಲ್ಲಿ, ಎರಡನೇ ಮುಂದುವರಿದ ಸುತ್ತಿನಲ್ಲಿ ಹಂಚಿಕೆಯಾದ ಸೀಟಿಗೆ ಪ್ರವೇಶ ಪಡೆಯಬೇಕು. ಒಂದುವೇಳೆ ಮುಂದಿನ ಎರಡನೇ ಮುಂದುವರಿದ ಸುತ್ತಿನಲ್ಲಿ ಮೆರಿಟ್ ಆಧಾರದ ಮೇಲೆ **higher order options** ಗಳಲ್ಲಿ ಯಾವುದೇ ಸೀಟು ಹಂಚಿಕೆಯಾಗದಿದ್ದಲ್ಲಿ, ಈಗಾಗಲೇ ಎರಡನೇ ಸುತ್ತಿನಲ್ಲಿ ಹಂಚಿಕೆಯಾದ ಸೀಟಿಗೆ ಪ್ರವೇಶ ಪಡೆಯಲು ಇಚ್ಛಿಸುತ್ತೇನೆ ಎಂದು ದೃಢೀಕರಿಸುತ್ತೇನೆ. ಅಭ್ಯರ್ಥಿಗಳು ಈ ಮೇಲಿನ ರೀತಿಯಲ್ಲಿ ನಿರ್ಧರಿಸುವುದಾಗಿದ್ದರೆ / ಕ್ರಮವಹಿಸುವುದಾಗಿದ್ದರೆ, ಪ್ರಾಧಿಕಾರದ ವೆಬ್‌ಸೈಟಿನಲ್ಲಿ ನಿಗದಿತ ಲಿಂಕ್‌ನಲ್ಲಿ **CHOICE 2** ಅನ್ನು ಆಯ್ಕೆ ಮಾಡಿಕೊಂಡು ಎರಡನೇ ಸುತ್ತಿನಲ್ಲಿ ಭಾಗವಹಿಸಬಹುದು.

**ಮುಖ್ಯವಾದುದು:** ಅಭ್ಯರ್ಥಿಗಳು ಎರಡನೇ ಸುತ್ತಿನಲ್ಲಿ ಹಂಚಿಕೆಯಾದ ಸೀಟನ್ನು ತಮ್ಮ ಬಳಿ ಇಟ್ಟುಕೊಂಡು (Hold ಮಾಡಿ) ಶುಲ್ಕ ಪಾವತಿಸಿ ಎರಡನೇ ಮುಂದುವರಿದ ಸುತ್ತಿನಲ್ಲಿ ಭಾಗವಹಿಸಬಹುದು. ಅಭ್ಯರ್ಥಿಗಳಿಗೆ ಎರಡನೇ ಮುಂದುವರಿದ ಸುತ್ತಿನಲ್ಲಿ **higher order options** ಗಳಿಗೆ ಮಾತ್ರ ಸೀಟು ಆಯ್ಕೆಗೆ ಪರಿಗಣಿಸಲಾಗುವುದು.

ವಿವರಣೆ: **CHOICE-2** ಅಭ್ಯರ್ಥಿಗಳು ಎರಡನೇ ಮುಂದುವರಿದ ಸುತ್ತಿನಲ್ಲಿ ಭಾಗವಹಿಸಲು ಇಚ್ಛಿಸಿರುತ್ತಾರೆ ಎಂದರೆ ಎರಡನೇ ಸುತ್ತಿನಲ್ಲಿ ಹಂಚಿಕೆಯಾದ ಸೀಟಿಗಿಂತ ಉತ್ತಮವಾದ ಸೀಟನ್ನು ಆಯ್ಕೆ ಮಾಡಿಕೊಳ್ಳಲು ಭಾಗವಹಿಸುತ್ತಾರೆ. ಎರಡನೇ ಮುಂದುವರಿದ ಸುತ್ತಿನಲ್ಲಿ ಅಭ್ಯರ್ಥಿಗಳಿಗೆ ಯಾವುದೇ ಮೇಲ್ಪಟ್ಟ ಆದ್ಯತೆಗಳ ಸೀಟು ಅಂದರೆ ಹಂಚಿಕೆಯಾದ ಸೀಟಿನ ಮೇಲ್ಪಟ್ಟ ಇಚ್ಛೆ / ಆಯ್ಕೆಗಳು (Higher order Options means, options entered above the allotted option) ದೊರಕದಿದ್ದಲ್ಲಿ ಎರಡನೇ ಸುತ್ತಿನಲ್ಲಿ ಹಂಚಿಕೆಯಾದ ಸೀಟೇ ಉಳಿಯುತ್ತದೆ. ಒಂದುವೇಳೆ ಎರಡನೇ ಮುಂದುವರಿದ ಸುತ್ತಿನಲ್ಲಿ ಮೆರಿಟ್ ಹಾಗು ಅಭ್ಯರ್ಥಿಗಳು ಮೇಲ್ಪಟ್ಟ ಇಚ್ಛೆ / ಆಯ್ಕೆಗಳಲ್ಲಿ ಆದ್ಯತಾ ಕ್ರಮದಲ್ಲಿ ಉಳಿಸಿಕೊಳ್ಳುವ ಸೀಟು ದೊರೆತಲ್ಲಿ ಎರಡನೇ ಸುತ್ತಿನಲ್ಲಿ ಹಂಚಿಕೆಯಾದ ಸೀಟು ತಂತಾನೆ ರದ್ದುಗೊಂಡು ಸೀಟ್ ಮ್ಯಾಟ್ರಿಕ್ಸ್ ಪೂಲ್‌ಗೆ ಸೇರ್ಪಡೆಯಾಗಿ ನಂತರದ ಅಭ್ಯರ್ಥಿಗಳಿಗೆ ಹಂಚಿಕೆ ಮಾಡಲಾಗುವುದು. ಎರಡನೇ ಮುಂದುವರಿದ ಸುತ್ತಿನಲ್ಲಿ ಹೊಸದಾಗಿ ಹಂಚಿಕೆಯಾಗುವ ಸೀಟನ್ನೇ ಕಡ್ಡಾಯವಾಗಿ ಪಡೆಯಬೇಕು.

ಗಮನಿಸಿ: ಇಚ್ಛೆ / ಆಯ್ಕೆಗಳನ್ನು (options) **ಹೊಸದಾಗಿ ಸೇರಿಸಲು ಅವಕಾಶ ನೀಡಲಾಗುವುದು.** ಹೊಸದಾಗಿ ಸೇರಿಸುವ options ಗಳು ಸೀಟುಗಳ ಲಭ್ಯತೆಗೆ ಒಳಪಟ್ಟಿರುತ್ತದೆ, ನಿಮ್ಮ ನಂತರದ ಅಭ್ಯರ್ಥಿಗಳು options ಗಳನ್ನು ನಮೂದಿಸಿರಬಹುದು ಮತ್ತು ಅರ್ಹತೆಯ ಆಧಾರದ ಮೇಲೆ ಸೀಟು ಹಂಚಿಕೆಯಾಗಿರಬಹುದು. ಎರಡನೇ ಮುಂದುವರಿದ ಸೀಟು ಹಂಚಿಕೆಯ ಪ್ರಕ್ರಿಯೆಯಲ್ಲಿ ಅಭ್ಯರ್ಥಿಗಳು ಅಭ್ಯರ್ಥಿಯ ರ್‍ಯಾಂಕ್ ಸರದಿಯ ನಂತರ ಉದ್ಭವಿಸುವ ಸೀಟುಗಳನ್ನು ಪಡೆಯಲು ಹಕ್ಕನ್ನು ಚಲಾಯಿಸುವಂತಿಲ್ಲ.

**CHOICE-2 ಅನ್ನು ಆಯ್ಕೆ ಮಾಡುವ ಅಭ್ಯರ್ಥಿಗಳು ಈ ಕೆಳಗಿನ ನಿರ್ದೇಶನಗಳನ್ನು ಪಾಲಿಸಬೇಕು.**

- ಎರಡನೇ ಮುಂದುವರಿದ ಸುತ್ತಿನ ಇಚ್ಛೆ / ಆಯ್ಕೆಗಳನ್ನು ದಾಖಲಿಸುವ ಪ್ರಕ್ರಿಯೆ ಪ್ರಾರಂಭಿಸಿದ ನಂತರ ಎರಡನೇ ಸುತ್ತಿನಲ್ಲಿ ಅಭ್ಯರ್ಥಿಗಳು ದಾಖಲಿಸಿದ higher order options ಗಳನ್ನು ಮಾತ್ರ ತೋರಿಸಲಾಗುವುದು, ಅಭ್ಯರ್ಥಿಗಳು higher order options ಗಳನ್ನು ಬದಲಾಯಿಸಿಕೊಳ್ಳಬಹುದು ಅಥವಾ ಆದ್ಯತಾ ಕ್ರಮಗಳನ್ನು ಮಾರ್ಪಡಿಸಿಕೊಳ್ಳಬಹುದು ಅಥವಾ ಯಾವುದಾದರೂ options ಬೇಡವಾದಲ್ಲಿ ತೆಗೆದು ಹಾಕಬಹುದು.
- **CHOICE-2** ಅಭ್ಯರ್ಥಿಗಳು ಎರಡನೇ ಸುತ್ತಿನಲ್ಲಿ ಆಯ್ಕೆಯಾದ ಸೀಟನ್ನು ತಮ್ಮೊಡನೆ ಉಳಿಸಿಕೊಂಡು ಎರಡನೇ ಮುಂದುವರಿದ ಸುತ್ತಿನಲ್ಲಿ ಭಾಗವಹಿಸುತ್ತಾರೆ. ಅಂತಹ ಅಭ್ಯರ್ಥಿಗಳಿಗೆ ಯಾವುದೇ ಸೀಟು ಅಂದರೆ Higher Order Options ಹಂಚಿಕೆಯಾದಲ್ಲಿ ಎರಡನೇ ಸುತ್ತಿನಲ್ಲಿ ಹಂಚಿಕೆಯಾದ ಸೀಟು ರದ್ದುಗೊಳ್ಳುತ್ತದೆ. ಎರಡನೇ ಮುಂದುವರಿದ ಸುತ್ತಿನಲ್ಲಿ ಯಾವುದೇ ಸೀಟು ಹಂಚಿಕೆಯಾಗದಿದ್ದಲ್ಲಿ ಎರಡನೇ ಸುತ್ತಿನಲ್ಲಿ ಪಡೆದ ಸೀಟು ಅವರ ಬಳಿಯೇ ಇರುತ್ತದೆ.
- Higher Order Options ಅಂದರೆ, ಒಬ್ಬ ಅಭ್ಯರ್ಥಿಯು 87 ಆಪ್ಷನ್‌ಗಳನ್ನು ದಾಖಲಿಸಿದ್ದಲ್ಲಿ, ಇವುಗಳ ಪೈಕಿ ಎರಡನೇ ಸುತ್ತಿನಲ್ಲಿ ಅಭ್ಯರ್ಥಿಗೆ 43 ನೇ ಕ್ರಮಾಂಕದ ಆಪ್ಷನ್ ನ ಸೀಟು ದೊರಕಿದೆ ಎಂದು ಭಾವಿಸಿದಲ್ಲಿ, 1 ರಿಂದ 42 ನೇ ಆಪ್ಷನ್‌ಗಳ ಸೀಟುಗಳು Higher Order Options ಆಗುತ್ತದೆ. ಎರಡನೇ ಮುಂದುವರಿದ ಸುತ್ತಿನಲ್ಲಿ ಈ ಮೇಲಿನ ಯಾವುದೇ ಆಪ್ಷನ್‌ಗಳಿಗೆ ಮೆರಿಟ್ ಆಧಾರದ ಮೇಲೆ ಸೀಟು ಹಂಚಿಕೆಯಾದಲ್ಲಿ ಎರಡನೇ ಸುತ್ತಿನಲ್ಲಿ ಹಂಚಿಕೆಯಾದ ಸೀಟು ರದ್ದುಗೊಳ್ಳುತ್ತದೆ.
- Higher Order Options ಗಳಲ್ಲಿ ಯಾವುದೇ ಸೀಟು ಹಂಚಿಕೆಯಾಗದಿದ್ದಲ್ಲಿ ಎರಡನೇ ಸುತ್ತಿನಲ್ಲಿ ಆಯ್ಕೆಯಾದ ಸೀಟು ಅಭ್ಯರ್ಥಿಯ ಹೆಸರಿನಲ್ಲಿರುತ್ತದೆ.
- ಅಭ್ಯರ್ಥಿಯು ಅವರ option portal ನಲ್ಲಿ ಅನಗತ್ಯ options ಗಳು ಇದೆ ಎಂದು ತೀರ್ಮಾನಿಸಿದಲ್ಲಿ, ಪೋಷಕರೊಡನೆ ಚರ್ಚಿಸಿ ಅಂತಹ options ಗಳನ್ನು ಅಳಿಸಬಹುದು ಎಂದು ಅಭ್ಯರ್ಥಿಗಳಿಗೆ ಸೂಚಿಸಲಾಗಿದೆ.

**CHOICE-3:** ಅಭ್ಯರ್ಥಿಯು ತನಗೆ ಎರಡನೇ ಸುತ್ತಿನಲ್ಲಿ ದೊರಕಿರುವ ಸೀಟು ತೃಪ್ತಿಕರವಾಗಿಲ್ಲ, ನಾನು ಎರಡನೇ ಸುತ್ತಿನಲ್ಲಿ ಹಂಚಿಕೆಯಾದ ಸೀಟನ್ನು ರದ್ದುಪಡಿಸಿಕೊಂಡು ಎರಡನೇ ಮುಂದುವರಿದ ಸುತ್ತಿನಲ್ಲಿ ಭಾಗವಹಿಸುತ್ತೇನೆ ಎಂದು ಧೃಡೀಕರಿಸುತ್ತೇನೆ.

ಕ್ರಮ: ಅಭ್ಯರ್ಥಿಗಳು ಈ ಮೇಲಿನ ರೀತಿಯಲ್ಲಿ ಕ್ರಮವಹಿಸಲು ನಿರ್ಣಯಿಸಿದರೆ CHOICE-3 ಅನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಆಯ್ಕೆ ಮಾಡಿಕೊಳ್ಳಬೇಕು.

ಮುಖ್ಯವಾದುದು:

(a) CHOICE-3 ಅನ್ನು ಆಯ್ಕೆ ಮಾಡಿಕೊಂಡಿರುವ ಅಭ್ಯರ್ಥಿಗಳು ಎರಡನೇ ಸುತ್ತಿನಲ್ಲಿ ಹಂಚಿಕೆಯಾದ ಸೀಟಿಗೆ ಶುಲ್ಕವನ್ನು ಪಾವತಿಸುವ ಅಗತ್ಯವಿರುವುದಿಲ್ಲ. CHOICE-3 ಅಭ್ಯರ್ಥಿಗಳು ಎರಡನೇ ಸುತ್ತಿನಲ್ಲಿ ಆಯ್ಕೆಯಾದ ಸೀಟನ್ನು ರದ್ದುಪಡಿಸಿಕೊಂಡು (ತಮ್ಮೊಡನೆ ಉಳಿಸಿಕೊಳ್ಳದೆ) ಎರಡನೇ ಮುಂದುವರಿದ ಸುತ್ತಿನಲ್ಲಿ ಭಾಗವಹಿಸುತ್ತಾರೆ. ಅಂತಹ ಅಭ್ಯರ್ಥಿಗಳಿಗೆ ಎರಡನೇ ಮುಂದುವರಿದ ಸುತ್ತಿನಲ್ಲಿ ಮೆರಿಟ್ ಆಧಾರದ ಮೇಲೆ ಸೀಟು ಹಂಚಿಕೆಯಾದಲ್ಲಿ ಮಾತ್ರ ಅವರು ಸೀಟನ್ನು ಆಯ್ಕೆ ಮಾಡಿಕೊಳ್ಳಬೇಕು.

CHOICE-3 ಅಭ್ಯರ್ಥಿಗಳಿಗೆ ಎರಡನೇ ಮುಂದುವರಿದ ಸುತ್ತಿನ ಇಚ್ಛೆ / ಆಯ್ಕೆಗಳನ್ನು ದಾಖಲಿಸುವ ಪ್ರಕ್ರಿಯೆ ಪ್ರಾರಂಭಿಸಿದ ನಂತರ ಎರಡನೇ ಸುತ್ತಿನಲ್ಲಿ ಅಭ್ಯರ್ಥಿಗಳು ದಾಖಲಿಸಿದ ಎಲ್ಲಾ options ಗಳನ್ನು ತೋರಿಸಲಾಗುವುದು (ಎರಡನೇ ಸುತ್ತಿನಲ್ಲಿ ಹಂಚಿಕೆಯಾಗಿ ಅಭ್ಯರ್ಥಿಯು ರದ್ದುಪಡಿಸಿಕೊಂಡ option ಅನ್ನು ಹೊರತುಪಡಿಸಿ ಉಳಿದ ಎಲ್ಲಾ ಇಚ್ಛೆ / ಆಯ್ಕೆಗಳು), ಅಭ್ಯರ್ಥಿಗಳು options ಗಳನ್ನು ಬದಲಾಯಿಸಿಕೊಳ್ಳಬಹುದು ಅಥವಾ ಆದ್ಯತಾ ಕ್ರಮಗಳನ್ನು ಮಾರ್ಪಡಿಸಿಕೊಳ್ಳಬಹುದು ಅಥವಾ ಯಾವುದಾದರೂ options ಬೇಡವಾದಲ್ಲಿ ತೆಗೆದು ಹಾಕಬಹುದು.

ಗಮನಿಸಿ: <u>ಇಚ್ಛೆ / ಆಯ್ಕೆಗಳನ್ನು (options) ಹೊಸದಾಗಿ ಸೇರಿಸಲು ಅವಕಾಶ ನೀಡಲಾಗುವುದು.</u> ಹೊಸದಾಗಿ ಸೇರಿಸುವ options ಗಳು ಅಥವಾ ಕೆಳಕ್ರಮಾಂಕದ options ಗಳು, ಸೀಟುಗಳ ಲಭ್ಯತೆಗೆ ಒಳಪಟ್ಟಿರುತ್ತದೆ, ನಿಮ್ಮ ನಂತರದ ಅಭ್ಯರ್ಥಿಗಳು options ಗಳನ್ನು ನಮೂದಿಸಿರಬಹುದು ಮತ್ತು ಅರ್ಹತೆಯ ಆಧಾರದ ಮೇಲೆ ಸೀಟು ಹಂಚಿಕೆಯಾಗಿರಬಹುದು. ಎರಡನೇ ಮುಂದುವರಿದ ಸೀಟು ಹಂಚಿಕೆಯ ಪ್ರಕ್ರಿಯೆಯಲ್ಲಿ ಅಭ್ಯರ್ಥಿಗಳು ಅಭ್ಯರ್ಥಿಯ ರ್‍ಯಾಂಕ್ ಸರದಿಯ ನಂತರ ಉದ್ಭವಿಸುವ ಸೀಟುಗಳನ್ನು ಪಡೆಯಲು ಹಕ್ಕನ್ನು ಚಲಾಯಿಸುವಂತಿಲ್ಲ.

<u>CHOICE-3 ಅನ್ನು ಆಯ್ಕೆ ಮಾಡುವ ಅಭ್ಯರ್ಥಿಗಳು ಈ ಕೆಳಗಿನ ನಿರ್ದೇಶನಗಳನ್ನು ಪಾಲಿಸಬೇಕು.</u>

- CHOICE-3 ಅನ್ನು ಆಯ್ಕೆ ಮಾಡಿಕೊಂಡಿರುವ ಅಭ್ಯರ್ಥಿಗಳು ಎರಡನೇ ಸುತ್ತಿನಲ್ಲಿ ಹಂಚಿಕೆಯಾದ ಸೀಟಿಗೆ ಶುಲ್ಕವನ್ನು ಪಾವತಿಸುವ ಅಗತ್ಯವಿರುವುದಿಲ್ಲ. CHOICE-3 ಅಭ್ಯರ್ಥಿಗಳಿಗೆ ಎರಡನೇ ಸುತ್ತಿನಲ್ಲಿ ಆಯ್ಕೆಯಾದ ಸೀಟು ಇಷ್ಟವಿರುವುದಿಲ್ಲ.
- CHOICE-3 ಅಭ್ಯರ್ಥಿಗಳು ಎರಡನೇ ಸುತ್ತಿನಲ್ಲಿ ಆಯ್ಕೆಯಾದ ಸೀಟನ್ನು ರದ್ದುಪಡಿಸಿಕೊಂಡು (ತಮ್ಮೊಡನೆ ಉಳಿಸಿಕೊಳ್ಳದೆ) ಎರಡನೇ ಮುಂದುವರಿದ ಸುತ್ತಿನಲ್ಲಿ ಭಾಗವಹಿಸುತ್ತಾರೆ. ಅಂತಹ ಅಭ್ಯರ್ಥಿಗಳಿಗೆ ಯಾವುದೇ ಸೀಟು ಹಂಚಿಕೆಯಾದಲ್ಲಿ ಮಾತ್ರ ಅವರು ಸೀಟನ್ನು ಆಯ್ಕೆ ಮಾಡಿಕೊಳ್ಳಬೇಕು.
- ಅಭ್ಯರ್ಥಿಯು ಅವರ option portal ನಲ್ಲಿ ಅನಗತ್ಯ options ಗಳು ಇದೆ ಎಂದು ತೀರ್ಮಾನಿಸಿದಲ್ಲಿ, ಪೋಷಕರೊಡನೆ ಸಮಾಲೋಚಿಸಿ ಅಂತಹ options ಗಳನ್ನು ಅಳಿಸಬಹುದು ಎಂದು ಅಭ್ಯರ್ಥಿಗಳಿಗೆ ಸೂಚಿಸಲಾಗಿದೆ.

**CHOICE-4:** ಅಭ್ಯರ್ಥಿಯು ತಮಗೆ ಮೊದಲ ಸುತ್ತಿನಲ್ಲಿ ಹಂಚಿಕೆಯಾಗಿರುವ ಸೀಟು ತೃಪ್ತಿಕರವಾಗಿಲ್ಲ, ನನಗೆ ಸೀಟು ಬೇಡ ಹಾಗೂ ನನಗೆ ಮುಂದಿನ ಸುತ್ತಿನಲ್ಲೂ ಸಹ ಯಾವುದೂ ಸೀಟು ತೆಗೆದುಕೊಳ್ಳಲು ಇಷ್ಟವಿಲ್ಲ,

**ಕ್ರಮ: ಅಭ್ಯರ್ಥಿಗಳು** ಈ ಮೇಲಿನಂತೆ ನಿರ್ಣಯಿಸಿದಲ್ಲಿ, CHOICE-4 ಅನ್ನು ಪ್ರಾಧಿಕಾರದ ವೆಬ್‌ಸೈಟ್ ನಲ್ಲಿ ಆಯ್ಕೆ ಮಾಡಿಕೊಳ್ಳಬಹುದು.

ಗಮನಿಸಿ: CHOICE-4 ಅನ್ನು ಆಯ್ಕೆ ಮಾಡಿಕೊಳ್ಳುವ ಅಭ್ಯರ್ಥಿಯು 2024ರ **ಕೋರ್ಸುಗಳ** ಸೀಟು ಹಂಚಿಕೆಗೆ ಮುಂದಿನ ಯಾವುದೇ ಸುತ್ತುಗಳಲ್ಲಿ ಭಾಗವಹಿಸಲು ಅರ್ಹನಾಗುವುದಿಲ್ಲ.

<u>ಎರಡನೇ ಸುತ್ತಿನಲ್ಲಿ ಯಾವುದೇ ಸೀಟು ಹಂಚಿಕೆಯಾಗದ ಅಭ್ಯರ್ಥಿಗಳಿಗೆ ಮಾಹಿತಿ</u>

ಈಗಾಗಲೇ OPTIONS ಗಳನ್ನು ನಮೂದಿಸಿ ಆದರೆ ಯಾವುದೇ ಸೀಟು ಹಂಚಿಕೆಯಾಗದ ಅಭ್ಯರ್ಥಿಗಳು CHOICE ಗಳನ್ನು ನೀಡುವ ಅವಶ್ಯಕತೆ ಇರುವುದಿಲ್ಲ. ಮುಂದಿನ ಸುತ್ತಿನ ಸೀಟು ಹಂಚಿಕೆಗೆ ಈಗಾಗಲೆ ನಮೂದಿಸಿರುವ options ಗಳೊಂದಿಗೆ ಮುಂದಿನ ಸುತ್ತಿನಲ್ಲಿ ಭಾಗವಹಿಸಬಹುದು. ಅಭ್ಯರ್ಥಿಯು ಅವರ option portal ನಲ್ಲಿ ಅನಗತ್ಯ options ಗಳು ಇದೆ ಎಂದು ತೀರ್ಮಾನಿಸಿದಲ್ಲಿ, ಪೋಷಕರೊಡನೆ ಸಮಾಲೋಚಿಸಿ ಅಂತಹ options ಗಳನ್ನು ಅಳಿಸಬಹುದು ಎಂದು ಅಭ್ಯರ್ಥಿಗಳಿಗೆ ಸೂಚಿಸಲಾಗಿದೆ. <u>ಇಚ್ಛೆ / ಆಯ್ಕೆಗಳನ್ನು (options) ಹೊಸದಾಗಿ ಸೇರಿಸಲು ಅವಕಾಶ ನೀಡಲಾಗುವುದು.</u> ಆದರೆ ಎರಡನೇ ಮುಂದುವರಿದ ಸೀಟು ಹಂಚಿಕೆಯ ಪ್ರಕ್ರಿಯೆಯಲ್ಲಿ ಅಭ್ಯರ್ಥಿಗಳು ಅಭ್ಯರ್ಥಿಯ ರ್‍ಯಾಂಕ್ ಸರದಿಯ ನಂತರ ಉದ್ಭವಿಸುವ ಸೀಟುಗಳನ್ನು ಪಡೆಯಲು ಹಕ್ಕನ್ನು ಚಲಾಯಿಸುವಂತಿಲ್ಲ.

ಕಾರ್ಯನಿರ್ವಾಹಕ ನಿರ್ದೇಶಕರು